# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 1344(1643)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮಾನ್ಯ ಗೃಹ, ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು

ವಿಷಯ : ಉಡುಪಿ ಜಿಲ್ಲಾ ನ್ಯಾಯಾಲಯದ ಸಂಕೀರ್ಣದ ಕಾಮಗಾರಿಯ ಕುರಿತು

(ಅ) ಉಡುಪಿ ಜಿಲ್ಲಾ ನ್ಯಾಯಾಲಯ ಸಂಕೀರ್ಣದ 3ನೇ ಮಹಡಿ ನಿರ್ಮಾಣದ ಮೊದಲನೇ ಹಂತದ ಕಾಮಗಾರಿ ಯಾವ ಹಂತದಲ್ಲಿದೆ; ಸದರಿ ಕಾಮಗಾರಿಗೆ ಮಂಜೂರಾದ ಅನುದಾನವೆಷ್ಟು; ಬಿಡುಗಡೆಯಾದ ಅನುದಾನವೆಷ್ಟು; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು; ವೆಚ್ಚ ಮಾಡಲಾದ ಅನುದಾನ ಎಷ್ಟು; (ವಿವರ ಒದಗಿಸುವುದು)

(ಆ) ಸದರಿ ಅಂದಾಜು ಪಟ್ಟಿಯಲ್ಲಿ ಸೇರ್ಪಡೆಯಾಗದ ಎಲೆಕ್ಟ್ರಿಕಲ್ ಮತ್ತಿತರ 2ನೇ ಹಂತದ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ; (ಪ್ರಸ್ತಾವನೆಯ ಪ್ರತಿ ಒದಗಿಸುವುದು)

(ಇ) ಮೊದಲ ಹಂತದ ಕಾಮಗಾರಿ ಮುಕ್ತಾಯಗೊಳಿಸುವ ಮುಂಚಿತವಾಗಿ 2ನೇ ಹಂತದ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವುದು ಅನಿವಾರ್ಯವಾಗಿರುವುದರಿಂದ 2ನೇ ಹಂತದ ಕಾಮಗಾರಿಗೆ ತಕ್ಷಣ ಅನುದಾನ ಬಿಡುಗಡೆ ಮಾಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ? (ವಿವರ ಒದಗಿಸುವುದು)